## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಆರ್. ಶ್ರೀನಿವಾಸರೆಡ್ಡಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನೀಯರಿಂಗ್ ಉಪ ವಿಭಾಗ, ಬಾಗೇಪಲ್ಲಿ ಇವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ.

ಓದಲಾಗಿದೆ. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 45 ಇಎನ್‌ಕ್ಯೂ 2011, ದಿನಾಂಕ. 22-12-2011.

ಪ್ರಸ್ತಾವನೆ:

ಚಿಕ್ಕಬಳ್ಳಾಪುರ ಜಿಲ್ಲೆ, ಬಾಗೇಪಲ್ಲಿ ತಾಲ್ಲೂಕಿನ ಪಾತಪಾಳ್ಯ ಗ್ರಾಮ ಪಂಚಾಯತಿಯ ದೇವರಾಜಪಲ್ಲಿ ಗ್ರಾಮದ ಕಾಲೋನಿಯಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸಿಮೆಂಟ್ ಮತ್ತು ಚರಂಡಿ ಕಾಮಗಾರಿಯನ್ನು ಪೂರ್ಣಗೊಳಿಸಿರುವುದಾಗಿ, ನಂತರ ಕಾಮಗಾರಿ ಪೂರ್ಣಗೊಂಡಿಲ್ಲವೆಂದು ದ್ವಂದ್ವ ವರದಿಯನ್ನು ಸಲ್ಲಿಸಿರುವ ಆರೋಪದ ಮೇಲೆ ಶ್ರೀ ಎಲ್. ಜಯರಾಮಯ್ಯ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಮತ್ತು ಶ್ರೀ ಆರ್. ಶ್ರೀನಿವಾಸರೆಡ್ಡಿ, ಸಹಾಯಕ ಇಂಜಿನಿಯರ್ ಇವರುಗಳನ್ನು ಮೇಲೆ ಓದಲಾದ ದಿನಾಂಕ. 22-12-2011ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು.

ಜಿಲ್ಲಾಧಿಕಾರಿಗಳ ದಿನಾಂಕ. 10-11-2011ರ ವರದಿಯನ್ನು ಪುನರ್ ಪರಿಶೀಲಿಸಲಾಗಿ, ಮೇಲ್ಕಂಡ ಪ್ರಕರಣದಲ್ಲಿ ಶ್ರೀ ಎಲ್. ಜಯರಾಮಯ್ಯ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಇವರು ತಪ್ಪು ವರದಿಯನ್ನು ಸಲ್ಲಿಸಿದ್ದು, ಈ ವರದಿಯನ್ನು ಸಲ್ಲಿಸುವಲ್ಲಿ ಶ್ರೀ ಆರ್. ಶ್ರೀನಿವಾಸರೆಡ್ಡಿ, ಸಹಾಯಕ ಇಂಜಿನಿಯರ್ ಇವರ ಪಾತ್ರ ಕಂಡುಬಾರದ ಕಾರಣ ಸದರಿಯವರ ಅಮಾನತ್ತನ್ನು ತೆರವುಗೊಳಿಸಲು ಸರ್ಕಾರವು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

### ಆದೇಶ ಸಂಖ್ಯೆ.ಗ್ರಾಅಪ 45 ಇಎನ್‌ಕ್ಯೂ 2011, ಬೆಂಗಳೂರು, ದಿನಾಂಕ. 18-02-2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ ಶ್ರೀ ಆರ್.ಶ್ರೀನಿವಾಸರೆಡ್ಡಿ, ಸಹಾಯಕ ಇಂಜಿನಿಯರ್ ಇವರ ಅಮಾನತ್ತನ್ನು ತಕ್ಷಣದಿಂದ ಜಾರಿಗೆ ಬರುವಂತೆ ತೆರವುಗೊಳಿಸಿದೆ.

ಶ್ರೀ ಆರ್. ಶ್ರೀನಿವಾಸರೆಡ್ಡಿ, ಸಹಾಯಕ ಇಂಜಿನಿಯರ್ ಇವರ ಸ್ಥಳನಿಯುಕ್ತಿ ಬಗ್ಗೆ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರು ಮುಂದಿನ ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ವೈ.ಸಾಗರ), 18/2/2012
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)

----2

2. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
5. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜಕುಮಾರ್ ರಸ್ತೆ,. ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
6. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ.
8. ಅಧೀಕ್ಷಕ ಇಂಜಿನೀಯರ್, ಪಂಚಾಯತ್ ರಾಜ್ ಇಂಜಿನೀಯರಿಂಗ್ ವೃತ್ತ, ಬೆಂಗಳೂರು.
9. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ.
10. ಸಂಬಂಧಿಸಿದ ಅಧಿಕಾರಿಗೆ.
11. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ / ಸೇವೆಗಳು-ಸಿ).
12. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
13. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರದಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
14. ರಕ್ಷಾ ಕಡತ / ಮೇಲ್ವಿಚಾರಕರು, ಗಣಕಯಂತ್ರ ಕೋಶ ವಿಭಾಗ, / ಹೆಚ್ಚುವರಿ ಪ್ರತಿಗಳು.